ಅನುದಾನ ಬಿಡುಗಡೆ

2 (54) ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) : ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಯೋಜನೆಗಳಿಗೆ ಸರ್ಕಾರವು ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ;

ಆ) ಕಳೆದ ವರ್ಷ ರಾಜ್ಯ ಸರ್ಕಾರವು ಈ ಇಲಾಖೆಗೆ ಆಯವ್ಯಯದಲ್ಲಿ ಒದಗಿಸಲಾದ ಅನುದಾನವೆಷ್ಟು; ಬಿಡುಗಡೆ ಮಾಡಿರುವ ಅನುದಾನವೆಷ್ಟು; ವೆಚ್ಚವಾಗಿರುವ ಮೊತ್ತವೆಷ್ಟು ಹಾಗೂ ವೆಚ್ಚವಾಗದೇ ಉಳಿದಿರುವ ಮೊತ್ತವೆಷ್ಟು; (ವಿವರ ಒದಗಿಸುವುದು)

ಇ) ಅನುದಾನ ಉಳಿಕೆ ಆಗಲು ಕಾರಣಗಳೇನು? (ಸಂಪೂರ್ಣ ವಿವರವನ್ನು ಒದಗಿಸುವುದು)

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ)

ವರ್ಷ	ಯೋಜನಾ ವೆಚ್ಚವಾದ ಅನುದಾನ (ರೂ.ಲಕ್ಷಗಳಲ್ಲಿ)
2008–09	42,059.62
2009–10	51,355.45
2010–2011	68,105.84

ಆ)

ವರ್ಷ	ಆಯವ್ಯಯದಲ್ಲಿ ಒದಗಿಸಲಾದ ಅನುದಾನ (ಯೋಜನೆ)	ವೆಚ್ಚ	ಉಳಿತಾಯ
2010–11	76,505.35	68,105.84	8,399.51

ಇ) ಮೇಲ್ಕಂಡ ಅನುದಾನದಲ್ಲಿ ಜಲ ಸಂವರ್ಧನೆ ಯೋಜನೆಯಲ್ಲಿ ರೂ.5113.91 ಲಕ್ಷ ಉಳಿತಾಯವಾಗಿದ್ದು, ಇದು ಸಮುದಾಯ ಆಧಾರಿತ ಕೆರೆ ನಿರ್ವಹಣೆ ಯೋಜನೆಯಾಗಿರುವುದರಿಂದ ಪೂರ್ಣ ವೆಚ್ಚವನ್ನು ಮಾಡಲು ಆಗಿರುವುದಿಲ್ಲ. ಉಳಿದ ಶೀರ್ಷಿಕೆಗಳಲ್ಲಿ ಸರಾಸರಿ ವೆಚ್ಚ ಶೇಕಡ 94.66 ರಷ್ಟಾಗಿದ್ದು, ವಿವಿಧ ಶೀರ್ಷಿಕೆಗಳಲ್ಲಿ ಮಾರ್ಚ್‌ನಲ್ಲಿ ಅಂತಿಮ ಕ್ಷಣಗಳಲ್ಲಿ ಉಂಟಾಗಿರುವ ಒತ್ತಡಗಳಿಂದಾಗಿ ಉಳಿತಾಯವಾಗಿರುತ್ತದೆ.

ಸಣ್ಣ ನೀರಾವರಿ ವ್ಯಾಪ್ತಿಗೆ ಬರುವ ಕೆರೆಗಳು

4 (7) **ಶ್ರೀ ಬಂಡೆಪ್ಪ ಖಾಶೆಂಪೂರ** : ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮಾಹಿತಿ ಒದಗಿಸುವುದು);

ಆ) ಈ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಒತ್ತುವರಿಯಾಗಿರುವ ಕೆರೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಪೂರ್ಣ ಮಾಹಿತಿ ಒದಗಿಸುವುದು);

ಈ) ಒತ್ತುವರಿಯಾಗಿರುವ ಕೆರೆಗಳನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಹಾಗಿದ್ದಲ್ಲಿ, ಸರ್ಕಾರ ಇದುವರೆವಿಗೂ ಎಷ್ಟು ಕೆರೆಗಳನ್ನು ಸ್ವಾಧೀನ ಪಡಿಸಿಕೊಂಡಿದೆ;(ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 3542 ಕೆರೆಗಳಿವೆ. ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಆ) ಬಂದಿದೆ.

ಇ) ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.